All India Radio: Bangalore
National Bulletin In Kannada
31.08.2026 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಬಿಷ್ಕೆಕ್‌ನಲ್ಲಿ ಇರಾನ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
- ೧.೨೭ ಲಕ್ಷ ಕೋಟಿ ರೂಪಾಯಿ ವೆಚ್ಚದ ಸೆಮಿಕಾನ್ ೨.೦ ಯೋಜನೆಗೆ ಕೇಂದ್ರ ಸರ್ಕಾರ ಅನುಮೋದನೆ
- ೨೦೨೬-೨೭ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಬೆಳವಣಿಗೆ ಶೇಕಡ ೭.೮ ರಷ್ಟು ದಾಖಲು
- ಒಲೊಮೌಕ್ ಟೇಬಲ್ ಟೆನಿಸ್ ಪಂದ್ಯಾವಳಿ; ಭಾರತದ ಅಂಕುರ್ ಭಟ್ಟಾಚಾರ್ಜಿಗೆ ಚೊಚ್ಚಲ ಪುರುಷರ ಸಿಂಗಲ್ಸ್ ಪ್ರಶಸ್ತಿ ಗರಿ

---

ಪ್ರಧಾನಿ ನರೇಂದ್ರ ಮೋದಿ ಅವರಿಂದು ಬಿಷ್ಕೆಕ್‌ನಲ್ಲಿ ಇಂದು ಇರಾನ್‌ನ ಅಧ್ಯಕ್ಷ ಡಾ.ಮಸೂದ್ ಪೆಝೆಶ್ಕಿಯಾನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಉದ್ಭವಿಸಿರುವ ವಿದ್ಯಮಾನಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಈ ಪ್ರದೇಶದಲ್ಲಿ ಶಾಂತಿಯುತವಾಗಿ ವ್ಯವಹರಿಸಲು ಮಾತುಕತೆ ಮತ್ತು ಸಂವಾದ ಅವಶ್ಯಕ ಎಂದು ಪ್ರತಿಪಾದಿಸಿರುವ ಪ್ರಧಾನಿ ನರೇಂದ್ರ ಮೋದಿ, ಜನಸಾಮಾನ್ಯರು ಮತ್ತು ಜನವಸತಿ ಮೂಲಸೌಕರ್ಯ ಹಾಗೂ ಸುರಕ್ಷಿತ ನೌಕಾಯಾನದ ಮೇಲೆ ದಾಳಿ ನಡೆಸಬಾರದು ಎಂದು ಅಭಿಪ್ರಾಯಪಟ್ಟರು.

ನಂತರ ಪ್ರಧಾನಿ ಅವರು, ಕಿರ್ಗಿಝ್ ಗಣರಾಜ್ಯದ ಅಧ್ಯಕ್ಷರೊಂದಿಗೆ ಮಾತುಕತೆ ನಡೆಸಿದರು. ಉಭಯ ದೇಶಗಳ ನಾಯಕರು ಪರಸ್ಪರ ಆರ್ಥಿಕ ಮತ್ತು ವಾಣಿಜ್ಯ ಸಂಬಂಧಗಳನ್ನು ಬಲಪಡಿಸಿಕೊಳ್ಳಲು ಸಮ್ಮತಿಸಿದರು.

ಇದಕ್ಕೂ ಮೊದಲ ಪ್ರಧಾನಿ ನರೇಂದ್ರ ಮೋದಿ ಅವರು, ಅರ್ಮೇನಿಯಾದ ಪ್ರಧಾನಿ ನಿಕೋಲ್ ಪಶಿನ್ಯಾನ್ ಅವರನ್ನು ಭೇಟಿ ಮಾಡಿದರು. ರಕ್ಷಣೆ, ಆರ್ಥಿಕತೆ, ಔಷಧಿ, ವಿಜ್ಞಾನ ಮತ್ತು ತಂತ್ರಜ್ಞಾನ, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ವಿಷಯಗಳಲ್ಲಿ ಎರಡು ದೇಶಗಳ ಪರಸ್ಪರ ಸಹಯೋಗದ ಬಗ್ಗೆ ಉಭಯ ನಾಯಕರು ಚರ್ಚೆ ನಡೆಸಿದರು.

---

ಜವಳಿ ಮತ್ತು ಉಡುಪು ಕ್ಷೇತ್ರವು ಭಾರತದ ಸಾಂಸ್ಕೃತಿಕ ಪರಂಪರೆಯ ಪ್ರಮುಖ ಭಾಗವಾಗಿರುವುದಲ್ಲದೆ, ಕೋಟ್ಯಂತರ ಜನರಿಗೆ ಜೀವನೋಪಾಯ ಒದಗಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ರಾಷ್ಟ್ರೀಯ ಫ್ಯಾಷನ್ ತಂತ್ರಜ್ಞಾನ ಸಂಸ್ಥೆಯ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ಮೌಲ್ಯಗಳಲ್ಲಿ ಬೇರೂರಿಕೊಂಡೇ ವಿದ್ಯಾರ್ಥಿಗಳು ಜಾಗತಿಕ ದೃಷ್ಟಿಕೋನವನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ದೃಷ್ಟಿಕೋನಕ್ಕೆ ಯುವಜನರು ಕೊಡುಗೆ ನೀಡಬೇಕು. ವಿದ್ಯಾರ್ಥಿಗಳು ಕೇವಲ ಉದ್ಯೋಗ ಅರಸುವವರಾಗದೆ, ಇತರರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವಂತಾಗಬೇಕು ಎಂದು ಸಲಹೆ ನೀಡಿದರು.

ಕಳೆದ ನಾಲ್ಕು ದಶಕಗಳಲ್ಲಿ ರಾಷ್ಟ್ರೀಯ ಫ್ಯಾಷನ್ ತಂತ್ರಜ್ಞಾನ ಸಂಸ್ಥೆಯ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗಮನಾರ್ಹ ಸಾಧನೆಗಳನ್ನು ಮಾಡಿದ್ದು, ಇದರಿಂದ ಭಾರತಕ್ಕೆ ಜಾಗತಿಕ ಮನ್ನಣೆ ದೊರೆತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

---

ದೇಶದಲ್ಲಿ ಚಿಪ್ ಉತ್ಪಾದನಾ ಪರಿಸರ ವ್ಯವಸ್ಥೆ ಉತ್ತೇಜಿಸಲು ಕೇಂದ್ರ ಸರ್ಕಾರ ಇಂದು ೧.೨೭ ಲಕ್ಷ ಕೋಟಿ ರೂಪಾಯಿ ವೆಚ್ಚದ ಸೆಮಿಕಾನ್ ೨.೦ ಯೋಜನೆಯನ್ನು ಪ್ರಕಟಿಸಿದೆ.

ಈ ಕುರಿತು ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಮುಂಬರುವ ವರ್ಷಗಳಲ್ಲಿ ಭಾರತ, ಜಾಗತಿಕ ಸೆಮಿಕಂಡಕ್ಟರ್ ಉದ್ಯಮ ಮಾರುಕಟ್ಟೆಯ ಸುಮಾರು ೧೦ ಪ್ರತಿಶತದಷ್ಟು ಹೊಂದುವ ಮೂಲಕ ಜಾಗತಿಕ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯಲ್ಲಿ ಹೆಚ್ಚಿನ ಪಾತ್ರ ವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ವೇಫರ್ ತಯಾರಿಕೆಯಿಂದ ಚಿಪ್ ಉತ್ಪಾದನೆಯವರೆಗೆ ಜಾಗತಿಕ ಸೆಮಿಕಂಡಕ್ಟರ್ ಮೌಲ್ಯ ಸರಪಳಿಯಲ್ಲಿ ದೇಶವನ್ನು ದೃಢವಾಗಿ ಅಳವಡಿಸಿಕೊಳ್ಳುವತ್ತ ಸರ್ಕಾರ ಗಮನಹರಿಸಿದೆ. ಮುಂಬರುವ ದಶಕಗಳಲ್ಲಿ ಪ್ರಮುಖ ಹೂಡಿಕೆಗಳಿಗೆ ಭಾರತ ಸೂಕ್ತ ತಾಣವಾಗಿದೆ ಎಂಬ ವಿಶ್ವಾಸವು ಜಾಗತಿಕ ಸೆಮಿಕಂಡಕ್ಟರ್ ಉದ್ಯಮದ ಪಾಲುದಾರರಲ್ಲಿ ಇದೆ ಎಂದರು.

ಜಾಗತಿಕ ಕೈಗಾರಿಕೆಗಳು ಉತ್ಪಾದನೆ ಮತ್ತು ವಿನ್ಯಾಸಕ್ಕಾಗಿ ಭಾರತವನ್ನು ಹೆಚ್ಚಾಗಿ ಅವಲಂಬಿಸಿವೆ. ಜಾಗತಿಕ ಸೆಮಿಕಂಡಕ್ಟರ್ ಪೂರೈಕೆ ಸರಪಳಿಯ ಅನಿವಾರ್ಯ ಭಾಗವಾಗುವುದು ಭಾರತದ ಉದ್ದೇಶವಾಗಿದೆ. ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

---

೨೦೨೬-೨೭ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಬೆಳವಣಿಗೆ ಶೇಕಡ ೭.೮ ರಷ್ಟಾಗಿದ್ದು, ಇದು ಅದ್ಭುತ ಸಾಧನೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ತೈಲ ಬೆಲೆ ಏರಿಳಿತ, ಪೂರೈಕೆ ಸರಪಳಿ ಅಡಚಣೆಗಳು ಮತ್ತು ಜಾಗತಿಕ ಅನಿಶ್ಚಿತತೆಗಳ ಹೊರತಾಗಿಯೂ ಈ ಸಾಧನೆಯು ದೇಶದ ಜನರ ಸಾಮೂಹಿಕ ಶಕ್ತಿ ಮತ್ತು ಸ್ಥಿತಿಸ್ಥಾಪಕತ್ವವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

ಇದೇ ವೇಳೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಾತನಾಡಿ, ಈ ಬಲವಾದ ಕಾರ್ಯಕ್ಷಮತೆಯ ಕೀರ್ತಿ ದೇಶದ ಜನರು ಮತ್ತು ಅವರ ಕಠಿಣ ಪರಿಶ್ರಮಕ್ಕೆ ಸಲ್ಲುತ್ತದೆ ಎಂದು ಹೇಳಿದರು.

ಆರ್ಥಿಕತೆಯ ಚುರುಕಾದ ನಿರ್ವಹಣೆಯೊಂದಿಗೆ ಎನ್‌ಡಿಎ ಸರ್ಕಾರ ಕೈಗೊಂಡ ಸುಧಾರಣೆಗಳು ಫಲಿತಾಂಶಗಳನ್ನು ನೀಡುತ್ತಿವೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ಎಲ್ಲಾ ನಾಗರಿಕರಿಗೆ ಆರ್ಥಿಕ ಅವಕಾಶಗಳನ್ನು ಮತ್ತಷ್ಟು ವಿಸ್ತರಿಸಲು ಬದ್ಧವಾಗಿದೆ ಎಂದು ಅವರು ತಿಳಿಸಿದರು.

---

ದ್ವಿಪಕ್ಷೀಯ ಸಹಕಾರ ಬಲಪಡಿಸಲು ಹಾಗೂ ಪರಿಸರ ಮತ್ತು ಹವಾಮಾನ ಬದಲಾವಣೆಯ ಕುರಿತು ಒಪ್ಪಂದ ವಿನಿಮಯ ಸುಗಮಗೊಳಿಸಲು ೪ನೇ ಇಂಡೋ-ಜರ್ಮನ್ ಪರಿಸರ ಸಭೆ ನಾಳೆ ನವದೆಹಲಿಯಲ್ಲಿ ನಡೆಯಲಿದೆ.

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹಾಗೂ ಜರ್ಮನ್ ಪರಿಸರ, ಹವಾಮಾನ ಸಂರಕ್ಷಣೆ, ಪ್ರಕೃತಿ ಸಂರಕ್ಷಣೆ ಮತ್ತು ಪರಮಾಣು ಸುರಕ್ಷತೆ ಸಚಿವ ಕಾರ್ಸ್ಟನ್ ಷ್ನೇಯ್ಡರ್ ಸಭೆಯ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ.

ದ್ವಿಪಕ್ಷೀಯ ಸಹಕಾರ ಮತ್ತಷ್ಟು ಬಲಪಡಿಸಲು, ಅಭಿಪ್ರಾಯ ವಿನಿಮಯ ಮಾಡಿಕೊಳ್ಳಲು ಮತ್ತು ಪ್ರಾಯೋಗಿಕ ಸಹಯೋಗವನ್ನು ಮುನ್ನಡೆಸಲು ಪರಿಸರ ಸಂರಕ್ಷಣೆ ಮತ್ತು ಹವಾಮಾನ ನೀತಿಗೆ ಸಂಬಂಧಿಸಿದ ಪ್ರಮುಖ ವಿಷಯಗಳನ್ನು ಎರಡೂ ಕಡೆಯವರು ಚರ್ಚಿಸಲಿದ್ದಾರೆ.

ಸಭೆಯಲ್ಲಿ ನೀತಿ ನಿರೂಪಕರು, ಖಾಸಗಿ ವಲಯದ ಪ್ರತಿನಿಧಿಗಳು, ಚಿಂತಕರು ಮತ್ತು ಇತರ ಪ್ರಮುಖ ಪಾಲುದಾರರು ಭಾಗವಹಿಸಲಿದ್ದಾರೆ.

---

ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ ಅವರು ನವದೆಹಲಿಯಲ್ಲಿಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಮುಂಬರುವ ಅವಧಿಗೆ ಕೈಗೊಳ್ಳಬೇಕಾದ ಆದ್ಯತೆಯ ಕಾರ್ಯಗಳು ಹಾಗೂ ಚಟುವಟಿಕೆಗಳನ್ನು ಪರಿಶೀಲಿಸಿದ ಅವರು, ಶಾಲಾ ಶಿಕ್ಷಣವನ್ನು ಮತ್ತಷ್ಟು ಪರಿಣಾಮಕಾರಿ, ಸುಲಭ ಲಭ್ಯ ಹಾಗೂ ಫಲಿತಾಂಶ ಆಧಾರವಾಗಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಿದರು.

ಕಲಿಕೆಯನ್ನು ಬಲಪಡಿಸುವುದು, ತಂತ್ರಜ್ಞಾನ ಆಧಾರಿತ ಪರಿಹಾರಗಳನ್ನು ಅಳವಡಿಸಿಕೊಳ್ಳುವುದು ಮತ್ತು ಪ್ರತಿಯೊಂದು ಮಗು ಕಲಿಯಲು, ಬೆಳೆಯಲು ಹಾಗೂ ಯಶಸ್ವಿಯಾಗಲು ಅನುಕೂಲಕರ ವಾತಾವರಣವನ್ನು ನಿರ್ಮಿಸುವುದರ ಮೇಲೆ ಸಭೆಯಲ್ಲಿ ಹೆಚ್ಚಿನ ಗಮನಹರಿಸಲಾಯಿತು.

---

ನೇಪಾಳದಲ್ಲಿ ಕಳೆದ ವಾರ ಸಂಭವಿಸಿದ ಭೀಕರ ಪ್ರವಾಹ ಮತ್ತು ಮಣ್ಣಿನ ಕುಸಿತದಿಂದ ಮೃತಪಟ್ಟವರ ಸಂಖ್ಯೆ ೬೦೩ಕ್ಕೆ ಏರಿಕೆಯಾಗಿದ್ದು, ೪ ಸಾವಿರದ ೨೪೭ಕ್ಕೂ ಹೆಚ್ಚು ಮಂದಿ ಇನ್ನೂ ಪತ್ತೆಯಾಗಿಲ್ಲ.

ಪ್ರವಾಹ ಪೀಡಿತ ನೇಪಾಳದ ಎಲ್ಲಾ ೮ ಜಿಲ್ಲೆಗಳಿಂದ ಮೃತದೇಹಗಳನ್ನು ಹೊರತೆಗೆಯಲಾಗಿದ್ದು, ಕಾಣೆಯಾದವರಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ. ಪ್ರವಾಹದಲ್ಲಿ ಸಿಲುಕಿರುವವರನ್ನು ರಕ್ಷಿಸಲು ರಕ್ಷಣಾ ತಂಡಗಳು ತೀವ್ರ ಕಾರ್ಯಾಚರಣೆ ನಡೆಸುತ್ತಿವೆ. ಒಟ್ಟು ಸುಮಾರು ೨೧ ಸಾವಿರ ಭದ್ರತಾ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ನೇಪಾಳದ ರಾಷ್ಟ್ರೀಯ ವಿಪತ್ತು ಅಪಾಯ ಕಡಿತ ಮತ್ತು ನಿರ್ವಹಣಾ ಪ್ರಾಧಿಕಾರ ತಿಳಿಸಿದೆ.

ಈ ನಡುವೆ, ಪ್ರವಾಹದಲ್ಲಿ ಆರು ಜಲವಿದ್ಯುತ್ ಯೋಜನೆಗಳಲ್ಲಿ ಕನಿಷ್ಠ ೬೩೩ ಕಾರ್ಮಿಕರು ಸಿಲುಕಿಕೊಂಡಿದ್ದಾರೆ ಎಂದು ಅಂದಾಜಿಸಲಾಗಿದೆ. ಟಿಬೆಟ್‌ನಲ್ಲಿ ಪ್ರವಾಹದಿಂದ ಮೃತಪಟ್ಟವರ

ಸಂಖ್ಯೆ ೧೮ಕ್ಕೆ ಏರಿಕೆಯಾಗಿದ್ದು, ೫೪೮ ಮಂದಿ ಕಾಣೆಯಾಗಿದ್ದಾರೆ. ನೇಪಾಳ-ಟಿಬೆಟ್ ಗಡಿಯಲ್ಲಿರುವ ಪಟ್ಟಣಗಳು ಮತ್ತು ಗ್ರಾಮಗಳ ಮೂಲಕ ಹಿಮ, ಬಂಡೆ, ಕೆಸರು ಮತ್ತು ಅವಶೇಷಗಳ ಭಾರಿ ಪ್ರವಾಹವೇ ಹರಿದು ಬಂದಿತ್ತು.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ನವದೆಹಲಿಯ ನೇಪಾಳ ರಾಯಭಾರ ಕಚೇರಿಯಲ್ಲಿ ಭಾರತ ಸರ್ಕಾರದ ಪರವಾಗಿ ಸಂತಾಪ ಸೂಚನಾ ಪುಸ್ತಕಕ್ಕೆ ಸಹಿ ಹಾಕಿದ್ದಾರೆ.

ಈ ತಿಂಗಳ ೨೮ ರಂದು ಸಂಭವಿಸಿದ ಹಠಾತ್ ಪ್ರವಾಹದಿಂದ ಉಂಟಾದ ಅಮೂಲ್ಯ ಜೀವಗಳ ನಷ್ಟ ಮತ್ತು ದೊಡ್ಡ ಪ್ರಮಾಣದ ವಿನಾಶಕ್ಕೆ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಈ ನೈಸರ್ಗಿಕ ವಿಕೋಪವು ನೇಪಾಳದ ನಾಗರಿಕರ ಜೊತೆಗೆ ಭಾರತೀಯ ಪ್ರಜೆಗಳು ಸೇರಿದಂತೆ ಹಲವಾರು ವಿದೇಶಿ ಪ್ರಜೆಗಳ ಮೇಲೂ ಪರಿಣಾಮ ಬೀರಿದೆ. ಈ ದುರಂತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳೊಂದಿಗೆ ಭಾರತ ಸರ್ಕಾರ ಇದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

---

ಬಾಂಗ್ಲಾದೇಶದೊಂದಿಗೆ ೩೦ ವರ್ಷಗಳ ಗಂಗಾ-ಪದ್ಮ ನದಿ ನೀರು ಹಂಚಿಕೆ ಒಪ್ಪಂದವನ್ನು ನವೀಕರಿಸುವ ಮುನ್ನ ರಾಜ್ಯದ ಹಿತಾಸಕ್ತಿಗಳನ್ನು ರಕ್ಷಿಸುವಂತೆ ಪಶ್ಚಿಮ ಬಂಗಾಳ ಸರ್ಕಾರ, ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದೆ. ಈ ಒಪ್ಪಂದ ಡಿಸೆಂಬರ್‌ನಲ್ಲಿ ಮುಕ್ತಾಯಗೊಳ್ಳಲಿದೆ.

ಹೂಗ್ಲಿ ನದಿಯ ನೌಕಾಯಾನ ಹಾಗೂ ಕೋಲ್ಕತ್ತಾದ ಶ್ಯಾಮ ಪ್ರಸಾದ್ ಮುಖರ್ಜಿ ಬಂದರಿನ ಹಡಗು ಸಂಚಾರವನ್ನು ರಕ್ಷಿಸಲು ಬೇಸಿಗೆಯಲ್ಲಿ ಸಾಕಷ್ಟು ನೀರಿನ ಹರಿವು ಖಚಿತಪಡಿಸಬೇಕು ಎಂದು ಪಶ್ಚಿಮ ಬಂಗಾಳ ಸರ್ಕಾರ ಒತ್ತಾಯಿಸಿದೆ.

ಮಾಲ್ಡಾ, ಮುರ್ಷಿದಾಬಾದ್ ಮತ್ತು ನಾಡಿಯಾ ಜಿಲ್ಲೆಗಳಲ್ಲಿ ನದಿ ತೀರದ ಸವಕಳಿ, ಹೂಳು ತುಂಬುವಿಕೆ ಹಾಗೂ ಪ್ರವಾಹದ ಬಗ್ಗೆಯೂ ರಾಜ್ಯ ಸರ್ಕಾರ ಕಳವಳ ವ್ಯಕ್ತಪಡಿಸಿದೆ.

---

ಜೆಕಿಯಾದಲ್ಲಿ ನಡೆದ ಡಬ್ಲ್ಯುಟಿಟಿ ಫೀಡರ್ ಒಲೊಮೌಕ್ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ ಭಾರತದ ಅಂಕುರ್ ಭಟ್ಟಾಚಾರ್ಜಿ ಚೊಚ್ಚಲ ಪುರುಷರ ಸಿಂಗಲ್ಸ್ ಪ್ರಶಸ್ತಿ ಗೆದ್ದಿದ್ದಾರೆ.

ವಿಶ್ವದ ೭೮ನೇ ಕ್ರಮಾಂಕದ ಅಂಕುರ್ ಸಿಂಗಲ್ಸ್ ಫೈನಲ್‌ನಲ್ಲಿ ಮೂರನೇ ಶ್ರೇಯಾಂಕದ ಸ್ಲೊವೇನಿಯಾದ ಡೆನಿ ಕೊಝುಲ್ ಅವರನ್ನು ೩-೧ ಅಂತರದಿಂದ ಮಣಿಸಿ ಪ್ರಶಸ್ತಿ ತಮ್ಮದಾಗಿಸಿಕೊಂಡರು.

ಇದೇ ವೇಳೆ, ಅಂಕುರ್ ಹಾಗೂ ಆಕಾಶ್ ಪಾಲ್ ಜೋಡಿಯು ಪುರುಷರ ಡಬಲ್ಸ್ ಪ್ರಶಸ್ತಿಯನ್ನೂ ಗೆದ್ದಿದೆ. ಫೈನಲ್‌ನಲ್ಲಿ ಹಂಗೇರಿಯ ಸಿಸಾಬಾ ಅಂದ್ರಾಸ್ ಸ್ಜಾಂತೋಶಿ ಮತ್ತು ಪೋಲೆಂಡ್‌ನ ಅಲನ್ ಕುಲ್ಜಿಕ್ಕಿ ಝುಲೆವ್ಸ್ಕಿ ಜೋಡಿಯನ್ನು ೩-೧ ಅಂತರದಿಂದ ಸೋಲಿಸಿತು.

---

ದುಬೈನಲ್ಲಿ ನಡೆಯಲಿರುವ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ಇಂದು ಇಂಡೋನೇಷ್ಯಾ ತಂಡವನ್ನು ಎದುರಿಸಲಿದೆ.

ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೩೦೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೪ ಸಾವಿರದ ೯೫೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೯೫ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೮೦ ಅಂಕಗಳು ದಾಖಲಾಗಿದೆ.

__________ ಮುಕ್ತಾಯ _________